ಕ್ರಿಯಾ ಯೋಜನೆಯನ್ನು ಸರ್ಕಾರ/ಜಿ.ಪಂ ನಿಂದ ರೂಪಿಸಿ ಅನುಷ್ಠಾನ ಗೊಳಿಸಲಾಗುವುದು.

ಈ) ಜಲ್ಲಿ ರಸ್ತೆಯಿಂದ ಟಾರ್ ಮಾಡಲು ಶಿವಮೊಗ್ಗ ವಿಭಾಗಕ್ಕೆ (ತೀರ್ಥಹಳ್ಳಿ ಮತ್ತು ಶಿವಮೊಗ್ಗ ತಾಲ್ಲೂಕು) ಒಟ್ಟು ರೂ. 7969.00 ಲಕ್ಷಗಳು ಮತ್ತು ಸಾಗರ ವಿಭಾಗಕ್ಕೆ (ಹೊಸನಗರ) ರೂ.1920 ಲಕ್ಷಗಳು ಸೇರಿ ಒಟ್ಟು ರೂ. 9889.00 ಲಕ್ಷ ಬೇಕಾಗುತ್ತದೆಂದು ಅಂದಾಜಿಸಿದೆ.

ಅಂತೆಯೇ ಮಣ್ಣಿನ ರಸ್ತೆಯಿಂದ ಟಾರ್ ಮಾಡಲು ಅನುಕ್ರಮವಾಗಿ ರೂ.17754.00 ಲಕ್ಷಗಳು ಮತ್ತು ರೂ. 10875.00 ಲಕ್ಷಗಳು ಸೇರಿ ಒಟ್ಟು ರೂ.28629.00 ಲಕ್ಷಗಳು ಬೇಕಾಗುತ್ತದೆಂದು ಅಂದಾಜಿಸಿದೆ.

ಬಸವಕಲ್ಯಾಣ ಕ್ಷೇತ್ರದಲ್ಲಿ ಕುಡಿಯುವ ನೀರಿನ ಸಮಸ್ಯೆ ಬಗ್ಗೆ

34(297): ಶ್ರೀ ಬಸವರಾಜ ಪಾಟೀಲ್ ಅಟ್ಟೂರು (ಬಸವಕಲ್ಯಾಣ): ಮಾನ್ಯ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬಸವ ಕಲ್ಯಾಣ ಮತಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಕುಡಿಯುವ ನೀರಿನ ಜ್ವಲಂತ ಸಮಸ್ಯೆಯ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಯಾವ ಯಾವ ಗ್ರಾಮಗಳು ಕುಡಿಯುವ ನೀರಿನ ಸಮಸ್ಯೆಯನ್ನು ಎದುರಿಸುತ್ತಿವೆ?

ಇ) ಈ ಗ್ರಾಮಗಳಲ್ಲಿ ಕುಡಿಯುವ ನೀರಿನ ಸರಬರಾಜಿಗೆ ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ; ಕಳೆದ ಎರಡೂವರೆ ವರ್ಷಗಳಲ್ಲಿ ಬಸವಕಲ್ಯಾಣ ಮತ ಕ್ಷೇತ್ರಕ್ಕೆ ಕುಡಿಯುವ ನೀರಿನ ಸರಬರಾಜಿಗಾಗಿ ಸರ್ಕಾರ ಪ್ರತಿವರ್ಷ ಎಷ್ಟು ಹಣವನ್ನು ವೆಚ್ಚಮಾಡಿದೆ? (ಗ್ರಾಮವಾರು ವಿವರ ಒದಗಿಸುವುದು);

ಈ) ಪ್ರಸಕ್ತ ಸಾಲಿನಲ್ಲಿ ಈ ಕ್ಷೇತ್ರದ ಯಾವ ಯಾವ ಗ್ರಾಮಗಳಲ್ಲಿ ಕುಡಿಯುವ ನೀರಿನ ಯೋಜನೆಯನ್ನು ಕಾರ್ಯಗತಗೊಳಿಸಲಾಗುತ್ತಿದೆ ಮತ್ತು ಇದಕ್ಕಾಗಿ ವೆಚ್ಚ ಮಾಡುತ್ತಿರುವ ಹಣವೆಷ್ಟು?

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಕುಡಿಯುವ ನೀರು ಸರಬರಾಜು ವ್ಯವಸ್ಥೆಗಾಗಿ ಅನುಮೋದಿತ ಕ್ರಿಯಾ ಯೋಜನೆಯನ್ವಯ ಕಾಮಗಾರಿಗಳನ್ನು ಅನುಷ್ಠಾನಗೊಳಿಸ ಲಾಗುತ್ತಿದೆ. ಕಳೆದ ಎರಡೂವರೆ ವರ್ಷಗಳಲ್ಲಿ ಬಸವ ಕಲ್ಯಾಣ ಮತಕ್ಷೇತ್ರ ವ್ಯಾಪ್ತಿಯಲ್ಲಿ ಅನುಷ್ಠಾನಗೊಳಿಸಿರುವ ಕಾಮಗಾರಿಗಳು ಮತ್ತು ವೆಚ್ಚದ ಗ್ರಾಮವಾರು ವಿವರಗಳನ್ನು ಅನುಬಂಧ– 1 ರಲ್ಲಿ ಅಡಕ ಮಾಡಿದೆ.

ಈ) ಪ್ರಸಕ್ತ ಸಾಲಿನಲ್ಲಿ ರೂ. 353.40 ಲಕ್ಷ ಅಂದಾಜು ವೆಚ್ಚದಲ್ಲಿ 103 ಗ್ರಾಮಗಳಲ್ಲಿ ಕುಡಿಯುವ ನೀರಿನ ಕಾಮಗಾರಿಗಳನ್ನು ಅನುಷ್ಠಾನ ಗೊಳಿಸಲಾಗುತ್ತಿದೆ.

ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಬಗ್ಗೆ

35(289): ಶ್ರೀ ಖಾದರ್ ಯು. ಟಿ. (ಮಂಗಳೂರು): ಮಾನ್ಯ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಗ್ರಾಮೀಣ ಪ್ರದೇಶಗಳಲ್ಲಿ ಮುಂಬರುವ ಬೇಸಿಗೆ ಕಾಲದಲ್ಲಿ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಸರ್ಕಾರ ಯಾವ ಯೋಜನೆ ಹಮ್ಮಿಕೊಳ್ಳಲಾಗಿದೆ?

ಆ) ಶಾಸಕರ ನೇತೃತ್ವದ ಟಾಸ್ಕ್‌ಫೋರ್ಸ್‌ಗೆ ನೀರಿನ ಸಮಸ್ಯೆಯ ಯೋಜನೆ ಅನುಷ್ಠಾನಗೊಳಿಸಲು ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ?

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವರು) :

ಅ) ಮುಂಬರುವ ಬೇಸಿಗೆಯಲ್ಲಿ ಉದ್ಭವಿಸಬಹುದಾದ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ರೂ.150.773 ಕೋಟಿ ಅಂದಾಜಿನ ತುರ್ತು ಕ್ರಿಯಾಯೋಜನೆಯನ್ನು ಸಿದ್ಧಪಡಿಸಲಾಗಿದೆ. ತೀವ್ರ ಕುಡಿಯುವ ನೀರಿನ ಸಮಸ್ಯೆಯಾದಲ್ಲಿ ಜಿಲ್ಲಾಧಿಕಾರಿಗಳ ಸಹಯೋಗದಲ್ಲಿ ಸ್ಥಳೀಯ ಅಗತ್ಯತೆ ಗನುಗುಣವಾಗಿ ಸಾಗಾಣಿಕೆ ಮುಖೇನ ನೀರು ಪೂರೈಕೆ ಸೇರಿದಂತೆ, ಖಾಸಗಿ ಕೊಳವೆ ಬಾವಿಗಳ ಸೇವೆ ಪಡೆಯುವುದು ಹಾಲಿಯಿರುವ ಕುಡಿಯುವ